ಅ) ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇದುವರೆಗೂ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಸದಿರುವುದರಿಂದ, ಬಡ ಕುಟುಂಬದವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಸಲು ಸರ್ಕಾರ ಎಂದು ಕ್ರಮ ಕೈಗೊಳ್ಳಲಾಗುವುದು?

ಇ) ಹಾಗಿದ್ದಲ್ಲಿ ಇದಕ್ಕೆ ಕಾರಣವೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಅ) ಬಂದಿದೆ, ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತರಬೇತಿ ಹೊಂದಿದ ವೈದ್ಯಾಧಿಕಾರಿಗಳು ಇಲ್ಲದಿರುವುದರಿಂದ, ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇತ್ತೀಚಿಗೆ ಸಂತಾನ ನಿರೋಧ ಶಸ್ತ್ರ ಚಿಕಿತ್ಸೆ ಮಾಡುತ್ತಿಲ್ಲ. ಆದರೆ, ಶಸ್ತ್ರ ಚಿಕಿತ್ಸೆಯನ್ನು ಕುಂದಾಪುರ ಸರ್ಕಾರಿ ಆಸ್ಪತ್ರೆಯಲ್ಲಿ ಮಾಡುತ್ತಿದ್ದು, ಅಂತಹವರನ್ನು ಆಸ್ಪತ್ರೆಗೆ ಇಲಾಖೆಯ ವಾಹನದಲ್ಲಿ ಕರೆದುಕೊಂಡು ಹೋಗಿ, ಸಂತಾನ ನಿರೋಧ ಶಸ್ತ್ರ ಚಿಕಿತ್ಸೆಯ ನಂತರ ಅವರನ್ನು ಇಲಾಖೆಯ ವಾಹನದಲ್ಲಿಯೇ ಅವರ ಮನೆಗೆ ಬಿಡಲಾಗುವುದು.

ಆ ಮತ್ತು ಇ) ವೈದ್ಯಾಧಿಕಾರಿಗಳಿಗೆ ತರಬೇತಿಯಾದ ಕೂಡಲೇ ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕುಟುಂಬ ಕಲ್ಯಾಣ ಶಸ್ತ್ರ ಚಿಕಿತ್ಸೆ ನಡೆಸಲು ಕ್ರಮ ಕೈಗೊಳ್ಳಲಾಗುವುದು. ಅಲ್ಲಿಯವರೆಗೆ ಸಂತಾನ ನಿರೋಧ ಶಸ್ತ್ರ ಚಿಕಿತ್ಸೆ ನಡೆಯುವ ಸಮಯದಲ್ಲಿ ತರಬೇತಿ ಹೊಂದಿದ ವೈದ್ಯಾಧಿಕಾರಿಗಳನ್ನು ನಿಯೋಜಿಸಲಾಗುವುದು.

ಹುಬ್ಬಳ್ಳಿಯ ಕೆ.ಎಂ.ಸಿ. (ಕಿಮ್ಸ್) ಸಂಸ್ಥೆ

14 12 (2006)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಕೆಎಂಸಿ ಸಂಸ್ಥೆಯ ಫಾರ್ಮಸಿ ವಿಭಾಗ ಉತ್ಪಾದನೆ ನಿಲ್ಲಿಸಲು ಕಾರಣಗಳೇನು?

ಆ) ಈ ಉತ್ಪಾದನೆ ಕಾರ್ಯವನ್ನು ಪುನರ್ ಪ್ರಾರಂಭಿಸಲು ಸರ್ಕಾರ ಕೈಗೊಂಡ

ಕ್ರಮಗಳೇನು?

ಇ) ಈ ಘಟಕದ ಮುಖ್ಯಸ್ಥರೊಬ್ಬರು ಇಲ್ಲಿಯ ವಸ್ತುಗಳನ್ನು ಕಳವು ಮಾಡಿಕೊಂಡು ಹೋಗುವಾಗ ಸಿಕ್ಕಿ ಹಾಕಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಸರ್ಕಾರ ಅವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು?

ಡಾ. ಎಂ.ಶಂಕರ್‌ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):

ಅ) ಭಾರತ ಘನ ಸರ್ಕಾರದ ದಕ್ಷಿಣ ವಲಯದ ಡ್ರಗ್ ಕಂಟ್ರೋಲರ್ ಮತ್ತು ಕರ್ನಾಟಕ ರಾಜ್ಯದ ಡ್ರಗ್ ಕಂಟ್ರೋಲರ್ ಇವರು ಜಂಟಿಯಾಗಿ ದಿನಾಂಕ: 8-5-92 ರಂದು ಇಲ್ಲಿಯ ಫಾರ್ಮಸಿ ಘಟಕ ಇನ್ಸ್‌ಪೆಕ್ಷನ್ ಮಾಡಿದ್ದು ಅದನ್ನು ಪೂರ್ತಿಯಾಗಿ ಡ್ರಗ್ ಕಂಟ್ರೋಲರ್ ಆ್ಯಕ್ಟ್ ಪ್ರಕಾರ ನವೀಕರಿಸಲು ದಿ: 4-5-95ರ ಪತ್ರದಲ್ಲಿ ನಿರ್ದೇಶನ ನೀಡಿ ನವೀಕರಣವಾಗುವವರೆಗೆ ಉತ್ಪಾದನೆಯನ್ನು ಸ್ಥಗಿತಗೊಳಿಸಲು ಸೂಚನೆ ನೀಡಿದ್ದಾರೆ. ಆದುದರಿಂದ ಡಿಸೆಂಬರ್ 97 ರಿಂದ ಉತ್ಪಾದನೆ ನಿಲ್ಲಿಸಲಾಗಿದೆ.

ಆ) ಡ್ರಗ್ ಕಂಟ್ರೋಲ್ ಆ್ಯಕ್ಟ್ ಅನುಸರಿಸಿ ಫಾರ್ಮಸಿ ಘಟಕದ ಪೂರ್ತಿ ಕಟ್ಟಡಗಳನ್ನು ರೂ.27.00 ಲಕ್ಷಗಳನ್ನು ನವೀಕರಿಸಲಾಗಿದೆ. ಡ್ರಗ್ ಕಂಟ್ರೋಲರ್ ಕಡೆಯಿಂದ ಲೈಸನ್ಸ್‌ನ್ನು ನವೀಕರಿಸಿ ಉತ್ಪಾದನೆಯನ್ನು ಪ್ರಾರಂಭಿಸಲಾಗುವುದು.

ಇ) ಈ ಕಳವಿನ ಪ್ರಸಂಗ ಕುರಿತು ಪೋಲಿಸರು ಕೇಸ್ ದಾಖಲು ಮಾಡಿಕೊಂಡಿದ್ದು ಸದ್ಯ ಕೇಸು ನ್ಯಾಯಾಲಯದಲ್ಲಿ ನಡೆಯುತ್ತಿದೆ. ನ್ಯಾಯಾಲಯವು ಅಂತಿಮ ತೀರ್ಪನ್ನು ಇನ್ನು ನೀಡಿರುವುದಿಲ್ಲ.

ಈ) ನಿಯಮಾವಳಿಗಳ ಪ್ರಕಾರ ಶಿಸ್ತಿನ ಕ್ರಮ ಜರುಗಿಸಲಾಗುವುದು.

ಗ್ರಾಮಾಂತರ ಪ್ರದೇಶಗಳಲ್ಲಿ ಗ್ರಂಥಾಲಯ ಸ್ಥಾಪಿಸುವುದು.

14 14 (204 1)

ಶ್ರೀ ಕೆ.ಜಯರಾಮಶೆಟ್ಟಿ (ಉಳ್ಳಾಲ): ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರ ಗ್ರಾಮಾಂತರ ಪ್ರದೇಶಗಳಲ್ಲಿ ಗ್ರಂಥಾಲಯ ಸ್ಥಾಪಿಸಲು ಹಾಕಿಕೊಂಡಿರುವ ಕ್ರಮಗಳೇನು?